2000ನೇ ಸಾಲಿನ ಕರ್ನಾಟಕ ಮಾಹಿತಿ ಪಡೆಯಲು ಹಕ್ಕು ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು) :— ಮಾನ್ಯ ಅಧ್ಯಕ್ಷರೆ, ಈ ಬಿಲ್ಲಿನ ಬಗ್ಗೆ ನಮ್ಮ ಪಕ್ಷದ ಸದಸ್ಯರುಗಳು ಮಾತನಾಡುವವರಿದ್ದಾರೆ, ಆದ್ದರಿಂದ ಸದರಿ ಬಿಲ್ಲನ್ನು ಮಧ್ಯಾಹ್ನ ತೆಗೆದುಕೊಳ್ಳಬೇಕೆಂದು ಕೋರುತ್ತೇನೆ.

ಶ್ರೀ: ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :— ಮಾನ್ಯ ಅಧ್ಯಕ್ಷರೆ, ಮಾನ್ಯ ವಿರೋಧ ಪಕ್ಷದ ನಾಯಕರು ಸದರಿ ಬಿಲ್ಲನ್ನು ಮಧ್ಯಾಹ್ನ ತೆಗೆದುಕೊಳ್ಳಿ ಎಂದು ಹೇಳುತ್ತಿದ್ದಾರೆ. ಇದರ ಬಗ್ಗೆ ಚರ್ಚೆ ಮಾಡಬೇಕಾದರೆ ಮಾನ್ಯ ವಿರೋಧ ಪಕ್ಷದ ನಾಯಕರೇ ಮಾತನಾಡಬೇಕಾಗುತ್ತದೆ.

ಅಧ್ಯಕ್ಷರು :— ಈಗ ಸಭೆಯು ಮುಕ್ತಾಯಗೊಂಡು ಪುನಃ 3 ಗಂಟೆ 45 ನಿಮಿಷಕ್ಕೆ ಸಮಾವೇಶಗೊಳ್ಳುತ್ತದೆ.

(ಸಭೆಯು 2 ಗಂಟೆ 36 ನಿಮಿಷಕ್ಕೆ ಮುಕ್ತಾಯಗೊಂಡು ಮತ್ತೆ 3 ಗಂಟೆ 45 ನಿಮಿಷಕ್ಕೆ ಸಮಾವೇಶಗೊಳ್ಳಲು ನಿಶ್ಚಯಿಸಿತು)

(ಸದನವು ಮತ್ತೆ 4 ಗಂಟೆ ನಿಮಿಷಕ್ಕೆ ಸಮಾವೇಶಗೊಂಡಿತು)

ಸಭಾಧ್ಯಕ್ಷರಾದ ಶ್ರೀ ಎಂ.ವಿ. ವೆಂಕಟಪ್ಪನವರು ಅಧ್ಯಕ್ಷಪೀಠದಲ್ಲಿ ಉಪಸ್ಥಿತರಿದ್ದರು

4. ಪ್ರಕಟಣೆ

ಅಧ್ಯಕ್ಷರು :— ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತು ದಿನಾಂಕ: 23-11-2000ರಂದು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿ ಇಲ್ಲದೆ ಅಂಗೀಕರಿಸಿದೆ ಎಂದು ಈ ಮೂಲಕ ತಿಳಿದು ಬಂದಿದೆ.

1) ಕರ್ನಾಟಕ ಮಾರಾಟ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2000.

2) ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ, 2000.